**Office of the Executive Engineer,**
**Rural Drinking Water and Sanitation Division, Mandya**
**Phone: 08232-222363** **email: eerwsmdy@gmail.com**

**No:EE/RDW&SD/MDY/MAHADEVAPURA/MVS/2021-22/** **Dt:**

**Subject** : Authorization for Submitting Forest Land Diversion For Implementation of Water Supply Scheme to Mahadevapura, Chikkankanahalli, K.Shettahalli and other 16 villages of Srirangapatna Taluk, Mandya District.

**Ref** : Honorable GOK Order: RDP/26/RWS (5) 2018 Bangalore, Dated:04.02/2019

* * * * * * * * * *

As per the Government order at Ref above, administrative approval has been accorded by Government for Providing Drinking Water Supply to Mahadevapura, Chikkankanahalli, K.Shettahalli and other 16 villages of Srirangapatna Taluk, Mandya District with Kaveri River as a source. As mentioned in the Government rder under the Ref Project to be implemented by Rural Water Supply and Sanitation Sub Division, Shrirangapattana. In this regard it is the responsibility of undersigned to get transferred land required for the implementation of the project to the RWS&S Sub Division Shrirangapattana.

Hence, undersigned is authorized to submit the Forest Clearence proposals of behalf of RWS Sub Division Shrirangapattana.

Executive Engineer,
RWS&S Division, Mandya

Executive Engineer
R.D.W. & S.Division,
Mandya-571 401.

Executive Engineer
R.D.W. & S.Division,
Mandya-571 401.

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮಂಡ್ಯ ಜಿಲ್ಲೆ, ಶ್ರೀರಂಗಪಟ್ಟಣ ತಾಲ್ಲೂಕಿನ ಮಹದೇವಪುರ, ಚಿಕ್ಕಅಂಕನಹಳ್ಳಿ, ಕೆ.ಶೆಟ್ಟಿಹಳ್ಳಿ ಮತ್ತು ಇತರೆ 16 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ: 1. ದಿನಾಂಕ:28.07.2016ರ ರಾಜ್ಯ ಮಟ್ಟದ ಯೋಜನಾ ಮಂಜೂರಾತಿ ಸಮಿತಿ ಸಭೆ(SLSSC) ನಡವಳಿಗಳು

2. ಮುಖ್ಯ ಇಂಜಿನಿಯರ್, RDWSD ರವರ ಕಡತ ಸಂಖ್ಯೆ:ಗ್ರಾಅಪ 63 ಗ್ರಾಕುನೀ&ನೈಇ 2018.

---

ಪೀಠಿಕೆ

ಮಂಡ್ಯ ಜಿಲ್ಲೆ, ಶ್ರೀರಂಗಪಟ್ಟಣ ತಾಲ್ಲೂಕಿನ ಮಹದೇವಪುರ, ಚಿಕ್ಕಅಂಕನಹಳ್ಳಿ, ಕೆ.ಶೆಟ್ಟಿಹಳ್ಳಿ ಮತ್ತು ಇತರೆ 16 ಗ್ರಾಮಗಳಿಗೆ ಸುರಕ್ಷಿತ ಹಾಗೂ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಯೋಜನೆಯ ಅಂದಾಜು ಮೊತ್ತ ರೂ.21.70ಕೋಟಿಗಳಿಗೆ ದಿನಾಂಕ:28.07.2016ರ SLSSC ಸಭೆಯಲ್ಲಿ ತಾತ್ವಿಕ ಅನುಮೋದನೆ ದೊರಕಿರುತ್ತದೆ. ಪ್ರಸ್ತುತ ಯೋಜನಾ ವಿನ್ಯಾಸವನ್ನು 85 LPCDಗೆ ಮಾರ್ಪಡಿಸಿದ್ದು, ಅಂದಾಜು ಮೊತ್ತ ರೂ.28.00ಕೋಟಿಗಳಾಗಿದೆ. ಮೇಲೆ (2)ರಲ್ಲಿ ಓದಲಾದ ಮುಖ್ಯ ಇಂಜಿನಿಯರ್, RDWSD ರವರ ಕಡತದಲ್ಲಿ 19 ಗ್ರಾಮಗಳಿಗೆ ರೂ.2800.00ಲಕ್ಷ ಅಂದಾಜಿನಲ್ಲಿ ಕುಡಿಯುವ ನೀರು ಪೂರೈಸುವ ಯೋಜನೆಗೆ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಪ್ರಸ್ತುತ ಯೋಜನೆಯಲ್ಲಿ ಪರಿಗಣಿಸಿರುವ ಗ್ರಾಮೀಣ ಪ್ರದೇಶಗಳು ಬರಪೀಡಿತ ಪ್ರದೇಶಗಳಾಗಿದ್ದು ಹಾಗೂ 55 LPCD ಗಿಂತ ಕಡಿಮೆ ಆವರಿಸಿರುವ ಪ್ರದೇಶಗಳಾಗಿವೆ ಹಾಗೂ 3 ಗುಣಭಾದಿತ ಜನವಸತಿಗಳು ಇರುತ್ತವೆ. ಈ ಯೋಜನೆಯ ಅನುಷ್ಠಾನದಿಂದ 85 LPCD ಯಂತೆ ಶುದ್ಧ ಕುಡಿಯುವ ನೀರನ್ನು 19 ಗ್ರಾಮಗಳಿಗೆ ಶಾಶ್ವತವಾಗಿ ಒದಗಿಸಬಹುದಾಗಿದೆ. ಚಾಲ್ತಿ ಪಾರದರ್ಶಕ ನೀತಿಯನ್ವಯ ನಿಯಮಾನುಸಾರ ಮಂಡ್ಯ ಜಿಲ್ಲಾ ಪಂಚಾಯತ್ ಹಾಗೂ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಮುಂದಿನ ಪ್ರಕ್ರಿಯೆಯನುಸರಿಸಲನುವಾಗುವಂತೆ NRDWP (Coverage & WQ) ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 26 ಗ್ರಾನೀಸ(5) 2018 ಬೆಂಗಳೂರು, ದಿನಾಂಕ:04.02.2019.**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಮಂಡ್ಯ ಜಿಲ್ಲೆ, ಮಹದೇವಪುರ, ಚಿಕ್ಕಅಂಕನಹಳ್ಳಿ, ಕೆ.ಶೆಟ್ಟಿಹಳ್ಳಿ ಮತ್ತು ಇತರೆ 16 ಗ್ರಾಮಗಳಿಗೆ ಸುರಕ್ಷಿತ ಹಾಗೂ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಯೋಜನೆ **ರೂ.2800.00ಲಕ್ಷ (ಎರಡು ಸಾವಿರದ ಎಂಟು ನೂರು ಲಕ್ಷ ರೂಪಾಯಿಗಳು ಮಾತ್ರ)** ಗಳ ಅಂದಾಜಿನಲ್ಲಿ 5 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ ಬಾಬ್ತು ಸೇರಿದಂತೆ ಕೇಂದ್ರ ಪುರಸ್ಕೃತ **NRDWP (C&Q)**ಗಳಡಿ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

Executive Engineer
R.D.W. & S.Division,
Mandya-571 401.

2. ಈ ಆಡಳಿತಾತ್ಮಕ ಅನುಮೋದನೆ ಮತ್ತು ಅನುದಾನ ವಿನಿಯೋಗ ಕೆಳಕಂಡ ಷರತ್ತುಗಳಿಗೊಳಪಟ್ಟಿರುತ್ತದೆ:

(ಅ) ಈ ಅನುಮೋದಿತ ಕುಡಿಯುವ ನೀರಿನ ಕಾರ್ಯಕ್ರಮದ ವ್ಯಾಪ್ತಿಗೆ ಬರುವ ಗ್ರಾಮ / ಜನವಸತಿಗಳು ಮತ್ತ್ಯಾವುದೇ ಯೋಜನೆಗಳಡಿ ಸೇರ್ಪಡೆಯಾಗಿರಬಾರದು.

(ಆ) ಗುತ್ತಿಗೆದಾರರು ಕಾಮಗಾರಿಯನ್ನು ಉತ್ತಮ ಗುಣಮಟ್ಟದಲ್ಲಿ ಮತ್ತು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು. ತದನಂತರ 5 ವರ್ಷಗಳ ಕಾಲ ಸದರಿ ಯೋಜನೆಗಳ ಸಂಪೂರ್ಣ ನಿರ್ವಹಣೆ ಮತ್ತು ಕಾರ್ಯಾಚರಣೆಯನ್ನು ಸದರಿ ಸಂಸ್ಥೆಯೇ ನಿರ್ವಹಿಸತಕ್ಕದ್ದು.

(ಇ) ಈ ಆದೇಶದಡಿ ಅನುಮೋದನೆಯಾದ ಯೋಜನೆಗೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ CE/RDWSD ದೃಢೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆಯಾಗಲಿದೆ. 2018-19ರ ಸಾಲಿನಲ್ಲಿ IMISನಡಿ ಒದಗಿಸಿರುವ ಅನುದಾನದ ವತಿಯಿಂದ ಯೋಜನೆಯನ್ನು ಅನುಷ್ಠಾನಗೊಳಿಸಬೇಕು.

(ಉ) ಯೋಜನಾ ಅನುಷ್ಠಾನವನ್ನು ಚಾಲ್ತಿ ಪಾರದರ್ಶಕ (KTPP ಕಾಯಿದೆಯನ್ವಯ) ನೀತಿಯನ್ವಯವೇ ಮಾಡತಕ್ಕದ್ದು ಮತ್ತು ಯೋಜನೆಯ ಅನುಷ್ಠಾನವನ್ನು ಕಡ್ಡಾಯವಾಗಿ ಸರ್ಕಾರದಿಂದ ಅನುಮೋದನೆಯಾಗಿರುವ ಸಂಸ್ಥೆ ಮೂಲಕ 3rd Party Inspectionಗೆ ಒಳಪಡಿಸುವುದು.

(ಊ) ಈ ಯೋಜನೆಗೆ ತಗಲುವ ಅನುಮೋದಿತ ಅಂದಾಜು ವೆಚ್ಚದ ವ್ಯಾಪ್ತಿಯೊಳಗೆ ಗುತ್ತಿಗೆ ನೀಡಿದ 24 ತಿಂಗಳೊಳಗಾಗಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿ ಯೋಜನೆಯನ್ನು ಕಾರ್ಯಗತಗೊಳಿಸತಕ್ಕದ್ದು. ಈಗ ಅನುಮೋದನೆಯಾದ ಕ್ರಿಯಾ ಯೋಜನೆಯ ಅಂದಾಜು ವೆಚ್ಚದಲ್ಲಿ ಹೆಚ್ಚಳವಾಗದಂತೆ ಎಲ್ಲಾ ಆಡಳಿತಾತ್ಮಕ ಹಾಗೂ ತಾಂತ್ರಿಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

(ಋ) Bulk Water meter ಹಾಗೂ House hold metering ವ್ಯವಸ್ಥೆಯನ್ನು MVS ಯೋಜನೆಗಳಿರುವೆಡೆ ಕಡ್ಡಾಯವಾಗಿ ಮಾಡಬೇಕು. ಆಯಾ ಗ್ರಾಮ ಪಂಚಾಯತಿ ಸದರಿ ಆಧಾರದ ಮೇಲೆ ಹೊರಗುತ್ತಿಗೆ ಸಂಸ್ಥೆಗೆ / ಸರ್ಕಾರಕ್ಕೆ ನೀರು ಬಳಕೆ ಆಧಾರದ ಮೇಲೆ ನೀರಿನ ಕರ ಪಾವತಿಸಬೇಕು.

(ಎ) ಯೋಜನೆ ಅನುಷ್ಠಾನಗೊಂಡು ಗುತ್ತಿಗೆದಾರರ 5 ವರ್ಷಗಳ O&M ನಿರ್ವಹಣಾ ಅವಧಿ ಮುಗಿದ ನಂತರ ಯೋಜನೆಯ ಕಾರ್ಯಾಚರಣೆ ಮತ್ತು ನಿರ್ವಹಣೆಯ ಸಂಪೂರ್ಣ ಜವಾಬ್ದಾರಿಯನ್ನು ಹೊರಗುತ್ತಿಗೆ ಆಧಾರದ ಮೇಲೆ ಮಾಡಿಸಬೇಕು ಹಾಗೂ ಗ್ರಾಮಗಳ ಆಂತರಿಕ ಸರಬರಾಜು ವ್ಯವಸ್ಥೆಯನ್ನು ಸಂಬಂಧಿಸಿದ ಗ್ರಾಮ ಪಂಚಾಯತ್ ಮುಖೇನ ನಡೆಸಲು ಗ್ರಾಮ ಪಂಚಾಯತ್ ಠರಾವು ಆಧರಿಸಿ ಸೂಕ್ತ ವ್ಯವಸ್ಥೆ ಮಾಡತಕ್ಕದ್ದು.

(ಏ) ಸರ್ಕಾರದ ನೀತಿಯನ್ವಯ ಮನೆ ಸಂಪರ್ಕ ಮತ್ತು ಸ್ಟ್ಯಾಂಡ್ ಪೋಸ್ಟ್‌ಗಳಿಗೆ ಕಲ್ಪಿಸಿರುವ ಸಂಪರ್ಕದನ್ವಯ ನಿರ್ವಹಣೆ ವೆಚ್ಚಕ್ಕನುಗುಣವಾಗಿ ಅಗತ್ಯ ನೀರಿನ ಶುಲ್ಕ ಸಂಗ್ರಹಿಸತಕ್ಕದ್ದು ಹಾಗೂ ಮನೆ ಸಂಪರ್ಕಕ್ಕೆ ನೀರಿನ ಠೇವಣಿಯನ್ನು ಗ್ರಾಮ ಪಂಚಾಯತ್ ಠರಾವಿನನ್ವಯ ಸಂಗ್ರಹಿಸುವುದು.

3. ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂ:FD 340 Exp-6/2018 ದಿನಾಂಕ:25.01.2019ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣ ಕುಡಿಯುವ ನೀರ ಮತ್ತು ನೈರ್ಮಲ್ಯ ಇಲಾಖೆ

ಪ್ರತಿಗಳು:

1. ಮಹಾಲೇಖಪಾಲರು (ಲೆಕ್ಕಪತ್ರ -AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-I – G&SSA- AUDIT) ಕರ್ನಾಟಕ, ಬೆಂಗಳೂರು.

Executive Engineer
R.D.W. & S.Division,
Mandya-571 401.

3. ಮಹಾಲೇಖಪಾಲರು (ಎಂಯು– II – E&RSA-) ಕರ್ನಾಟಕ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಜಲಸಂಪನ್ಮೂಲ ಇಲಾಖೆ, ವಿಕಾಸ ಸೌಧ ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು–1.
8. ವಿಶೇಷಾಧಿಕಾರಿ (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
9. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
10. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, ಕಾವೇರಿಭವನ, ಬೆಂಗಳೂರು–09.
11. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಮಂಡ್ಯ.**
12. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ / ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯತ್, **ಮಂಡ್ಯ.**
13. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, **ಮೈಸೂರು.**
14. ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, **ಮಂಡ್ಯ.**
15. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
16. ಮುಖ್ಯ ಲೆಕ್ಕಾಧಿಕಾರಿಗಳು, RDWSD, ಕಾವೇರಿಭವನ, ಬೆಂಗಳೂರು–09.
17. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
18. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿ.
19. ಆಯುಕ್ತರು, RDWSD / ಆಂತರಿಕ ಆರ್ಥಿಕ ಸಲಹೆಗಾರರು ಇವರುಗಳ ಆಪ್ತ ಸಹಾಯಕರು.
20. ಉಪ ನಿರ್ದೇಶಕರು, Network Management Center (TNMC), ನಂ.49, ಖನಿಜ ಭವನ, ರೇಸ್ ಕೋರ್ಸ ರಸ್ತೆ, ಬೆಂಗಳೂರು.
21. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB ಬ್ರ್ಯಾಂಚ್, ರಾಜದೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು.
22. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
23. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
24. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
25. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
26. ಶಾಖಾ ರಕ್ಷಾ ಕಡತ ಹೆಚ್ಚುವರಿ ಪ್ರತಿಗಳು.

Executive Engineer
R.D.W. & S.Division,
Mandya-571 401.